ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 92/2017

(ಫ್ರಾಸಾ-17 ಚಾಸಾ-26)
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು
ದಿಃ 09.09.2025

| | | |
|---|---|---|
| ಸಾಕ್ಷಿದಾರರ ಹೆಸರು | - | ಮುನೇಂದ್ರ |
| ತಂದೆಯ ಹೆಸರು | - | ರಂಗಸ್ವಾಮಿ |
| ವಯಸ್ಸು | - | 40 ವರ್ಷ, |
| ಉದ್ಯೋಗ | - | ಗಾರೆ ಕೆಲಸ |
| ವಾಸ | - | ಆನೇಕಲ್ |

<u>ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ</u>

ಈಗ ನಾನು ಒಂದು ದಾಖಲೆ ನೋಡುತ್ತಿದ್ದು ಸದರಿ ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಸದರಿ ದಾಖಲೆ ಸ್ಥಳ ಪಂಚನಾಮೆ ಇದ್ದು ಅದನ್ನು ನಿಶಾನೆ ಪಿ-21 ಎಂದು ಹಾಗೂ ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಶಾನೆ ಪಿ-21(ಎ) ಎಂದು ಗುರುತಿಸಲಾಯಿತು. ಈಗ 6-7 ವರ್ಷಗಳ ಹಿಂದೆ ನಾನು ನಿಪಿ-21 ಕ್ಕೆ ಪೋಲಿಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಶಾನೆ ಪಿ-21 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೋಲಿಸರು ನನಗೆ ಯಾರನ್ನೂ ತೋರಿಸಿರುವುದಿಲ್ಲ.

2. ಈಗ ನಾನು ಇನ್ನೊಂದು ದಾಖಲೆ ನೋಡುತ್ತಿದ್ದು ಸದರಿ ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಸದರಿ ದಾಖಲೆ ಸ್ಥಳ ಪಂಚನಾಮೆ ಇದ್ದು ಅದನ್ನು ನಿಶಾನೆ ಪಿ-22 ಎಂದು ಹಾಗೂ ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಶಾನೆ ಪಿ-22(ಎ) ಎಂದು ಗುರುತಿಸಲಾಯಿತು. ಈಗ 6-7 ವರ್ಷಗಳ ಹಿಂದೆ ನಾನು ನಿಪಿ-22 ಕ್ಕೆ ಪೋಲಿಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಶಾನೆ ಪಿ-22 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೋಲಿಸರು ನನಗೆ ಯಾರನ್ನೂ ತೋರಿಸಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಎಸ್ ಪಿಪಿ ರವರು ವಿನಂತಿಸಿದ್ದರಿಂದ ಸಾಕ್ಷಿಯ ಪಂಚನಾಮೆ ಹಾಗೂ ಇತರೆ ನ್ಯಾಯಾಲಯದ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

<u>ಪಾಟೀ ಸವಾಲುಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ</u>

3. ದಿಃ12.01.2017 ರಂದು ಪೋಲಿಸರು 1 ರಿಂದ 5 ನೇ ಆರೋಪಿತರು ತೋರಿಸಿದ ಕೃತ್ಯ ನಡೆದ ಸ್ಥಳವಾದ ಅನೇಕಲ್ ಟೌನ್ ಹೊಸೂರು ಬಾಗಿಲು ರಸ್ತೆ ಮಾರ್ಕೇಟ್ ರಸ್ತೆಯಲ್ಲಿರುವ 4 ನೇ ಆರೋಪಿಗೆ ಸೇರಿದ ಕೋಳಿ ಅಂಗಡಿ ಮಳಿಗೆ ಮುಂಭಾಗದಲ್ಲಿ ಕೊಲೆ ಮಾಡಲು ಸಂಚು ರೂಪಿಸಿರುವುದಾಗಿ ಸ್ಥಳ ತೋರಿಸಿದ ಮೇರೆಗೆ ನನ್ನ ಹಾಗೂ ಚಾಸಾ-25 ರವರ ಸಮಕ್ಷಮ ಬೆಳಗ್ಗೆ 11 ರಿಂದ 12 ಘಂಟೆಗೆ ನಿಪಿ-21 ರಂತೆ ಪಂಚನಾಮೆ ಕ್ರಮ ಜರುಗಿಸಿ ನಮಗೆ ಓದಿ ಹೇಳಿದಾಗ ನಾವು ಅದರಲ್ಲಿ ಬರೆದಿರುವುದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

4. ನಂತರ ಅಲ್ಲಿಂದ ಪೋಲಿಸರು 1 ರಿಂದ 5 ನೇ ಆರೋಪಿತರು ತೋರಿಸಿದ ಕೃತ್ಯ ನಡೆದ ಸ್ಥಳವಾದ ಅನೇಕಲ್ ಟೌನ್ ಪುರಸಭೆ ಕಾರ್ಯಾಲಯದ ಮುಂಭಾಗದಲ್ಲಿರುವ ಐಶ್ವರ್ಯ ಬಾರ್ ಅಂಡ್ ರೆಸ್ಟೋರೆಂಟ್ ಗ್ರೌಂಡ್ ಫ್ಲೋರ್ ನಲ್ಲಿ ಕೊಲೆ ಮಾಡಲು ಸಂಚು ರೂಪಿಸಿರುವುದಾಗಿ ಸ್ಥಳ ತೋರಿಸಿದ ಮೇರೆಗೆ ನನ್ನ ಹಾಗೂ ಚಾಸಾ-25 ರವರ ಸಮಕ್ಷಮ ಮಧ್ಯಾಹ್ನ 12.15 ರಿಂದ 01.15 ಘಂಟೆಗೆ ನಿಪಿ-22 ರಂತೆ ಪಂಚನಾಮೆ ಕ್ರಮ ಜರುಗಿಸಿ ನಮಗೆ ಓದಿ ಹೇಳಿದಾಗ ನಾವು ಅದರಲ್ಲಿ ಬರೆದಿರುವುದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

5. ಪೋಲಿಸರು ನಿಶಾನೆ ಪಿ-21 ಮತ್ತು 22 ರಂತೆ ನನ್ನ ಸಮಕ್ಷಮ ಪಂಚನಾಮೆ ಜರುಗಿಸಿದ್ದರೂ ಸಹ ಆರೋಪಿತರ ಮಾತು ಕೇಳಿಕೊಂಡು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u>  <u>ಆರೋಪಿತರ ಪರ ಶ್ರೀ ಎಂಜಿಪಿ ವಕೀಲರಿಂದಃ</u>**

ಆರೋಪಿತರ  ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸುತ್ತಾರೆ.

**<u>ಮರುವಿಚಾರಣೆಃ ಇಲ್ಲ</u>**

(ಸಾಕ್ಷಿ ಹೇಳಿದಂತೆ ಹೇಳಿಕೆಯನ್ನು ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿ ಓದಿ ಹೇಳಿದ್ದು ಸಾಕ್ಷಿ ಸರಿ ಇರುವುದಾಗಿ ಒಪ್ಪಿರುತ್ತಾರೆ ಎಂದು ದೃಡೀಕರಿಸುತ್ತೇನೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ಕೆ. ಗುರುಪ್ರಸಾದ್)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು